ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

8

ಇಲಾಖೆ / ವಿಷಯ : DEPARTMENT / SUBJECT: ಪರಿಷತ್ ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ

ದಿನಾಂಕ : DATE 29-10-20

# ಪರಿಷತ್ ಚುನಾವಣೆ: ಶೇ.71ರಷ್ಟು ಮತದಾನ

## ನ.2ಕ್ಕೆ 40 ಅಭ್ಯರ್ಥಿಗಳ ಹಣೆಬರಹ ಪ್ರಕಟ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ವಿಧಾನಪರಿಷತ್‌ನ ನಾಲ್ಕು ಸ್ಥಾನಗಳಿಗೆ ಬುಧವಾರ ರಾಜ್ಯದ ಹಲವು ಜಿಲ್ಲೆಗಳಲ್ಲಿ ಯಶಸ್ವಿಯಾಗಿ ಮತದಾನ ನಡೆಯಿತು. ಕೊರೋನಾ ಆತಂಕ ನಡುವೆ ಸಕಲ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು ಮತದಾನ ನಡೆಸಲಾಯಿತು. ಒಟ್ಟಾರೆಯಾಗಿ ಶೇ.71ರಷ್ಟು ಮತದಾನವಾಗಿದೆ. ಆಗ್ನೇಯ ಪದವೀಧರ ಕ್ಷೇತ್ರದಲ್ಲಿ ಅತಿ ಹೆಚ್ಚು ಮತದಾನವಾಗಿದ್ದು ಶೇ.75ರಷ್ಟು ಮತದಾನವಾಗಿದೆ. ಪಶ್ಚಿಮ ಪದವೀಧರ ಕ್ಷೇತ್ರದಲ್ಲಿ ಶೇ.70.11, ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಶೇ.73.32 ಮತ್ತು ಬೆಂಗಳೂರು ಶಿಕ್ಷಕರಕ್ಷೇತ್ರದಲ್ಲಿ ಶೇ.66ರಷ್ಟು ಮತದಾನವಾಗಿದೆ. ಅಭ್ಯರ್ಥಿಗಳ ಭವಿಷ್ಯ ಮತಪೆಟ್ಟಿಗೆ ಸೇರಿದ್ದು, ನ.2ರಂದು ಪ್ರಕಟವಾಗಲಿದೆ. ಹೀಗಾಗಿ ಎಲ್ಲರ ಚಿತ್ತ ಫಲಿತಾಂಶದತ್ತ ನೆಟ್ಟಿದೆ.

ವಿವರ ➘ 6

### ಮತ ಹಾಕಿದ ಸೋಂಕಿತ



ಪಶ್ಚಿಮ ಪದವೀಧರ ಕ್ಷೇತ್ರದ ಚುನಾವಣೆಯ ಅಣ್ಣಿಗೇರಿ ಪುರಸಭೆಯ ಮತಗಟ್ಟೆ ಸಂಖ್ಯೆ 50ರಲ್ಲಿ ಇಬ್ಬರು ಕೋವಿಡ್ ಸೋಂಕಿತರು ಪಿಪಿಇ ಕಿಟ್ ಧರಿಸಿ ತಮ್ಮ ಹಕ್ಕನ್ನು ಚಲಾಯಿಸಿದರು.